1	2	3	4
		9. ಕಾರ್ಯಪಾಲಕ ಅಭಿಯಂತರರು, ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ವಿಭಾಗ.	
4.	ಕೋಲಾರ	1. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ.	
		2. ಉಪ ಅರಣ್ಯ ಸಂರಕ್ಷಣಾಧಿಕಾರಿ. ಕುಟುಂಬ ಕಲ್ಯಾಣಾಧಿಕಾರಿ.	ಹೆಚ್ಚುವರಿ ವೆಚ್ಚವನ್ನು ಬಾಬ್ತಿಗೆ ಅಂದರೆ ವೇತನಕ್ಕಾಗಿ ಮಾಡಲಾಗಿದೆ.
		3. ಸಹಾಯಕ ನಿರ್ದೇಶಕರು, ರೇಷ್ಮೆ ಕೈಮಗ್ಗ, ಖಾದಿ	

ದೊಡ್ಡಬಳ್ಳಾಪುರ ನಗರ ಮತ್ತು ತಾಲ್ಲೂಕಿನ ಆಸ್ಪತ್ರೆಗಳಿಗೆ ಔಷಧ ಮತ್ತು ಉಪಕರಣಗಳ ಸರಬರಾಜು

499(439) -ಶ್ರೀ ವಿ ಕೃಷ್ಣಪ್ಪ (ದೊಡ್ಡಬಳ್ಳಾಪುರ) : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೊಡ್ಡಬಳ್ಳಾಪುರ ನಗರ ಮತ್ತು ತಾಲ್ಲೂಕಿನ ಆಸ್ಪತ್ರೆಗಳಲ್ಲಿ ಔಷಧಿ ಮತ್ತು ವೈದ್ಯಕೀಯ ಉಪಕರಣಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಕೊರತೆಯನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಯಾವಾಗ ನಿವಾರಿಸಲಾಗುವುದು;

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಬಂದಿಲ್ಲ.

ಆ) ಉದ್ಭವಿಸುವುದಿಲ್ಲ.

ಜನ ಮೆಚ್ಚಿದ ಶಿಕ್ಷಕರು

500(440) -ಶ್ರೀ ವಿ. ಕೃಷ್ಣಪ್ಪ (ದೊಡ್ಡಬಳ್ಳಾಪುರ) : ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜನ ಮೆಚ್ಚಿದ ಶಿಕ್ಷಕರನ್ನು ಆಯ್ಕೆ ಮಾಡಲು ಸರ್ಕಾರದ ನೀತಿ ನಿಯಮಗಳೇನು? ಇವರನ್ನು ಆಯ್ಕೆ ಮಾಡುವವರು ಯಾರು?

ಆ) 2001-02ನೇ ಸಾಲಿನಲ್ಲಿ ಜನಮೆಚ್ಚಿದ ಶಿಕ್ಷಕರನ್ನು ಆಯ್ಕೆ ಮಾಡುವಾಗ ತಾಲ್ಲೂಕು ಮಟ್ಟದಲ್ಲಿ ನಡೆದಿರುವ ಅವ್ಯವಹಾರಗಳು ಸರ್ಕಾರದ ಗಮನಕ್ಕೆ ಬಂದಿದೆಯೇ?